ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ರಾಜ್ಯ ರಸ್ತೆ ಸಾರಿಗೆ ನಿಗಮಗಳು/ಸಿಬ್ಬಂದಿ ವರ್ಗದವರು ಮತ್ತು ಎಲೆಕ್ಟ್ರಿಕ್ ಬಸ್ಸುಗಳು

ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮ ನಿರ್ದೇಶನ ಹೊಂದಿದವರು) -

41 (44) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ಸಾರಿಗೆಗೆ ಸಂಬಂಧಿಸಿದಂತೆ ಎಷ್ಟು ನಿಗಮಗಳಿವೆ; ಅವುಗಳಲ್ಲಿ ಸುಸ್ಥಿತಿಯಲ್ಲಿ ಸಂಚಾರಿಸುತ್ತಿರುವ ಬಸ್ಸುಗಳ ಸಂಖ್ಯೆ ಎಷ್ಟು; (ನಿಗಮವಾರು ಮಾಹಿತಿ ನೀಡುವುದು) ಆಯಾ ನಿಗಮಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಚಾಲಕರು ಮತ್ತು ನಿರ್ವಾಹಕರು ಸೇರಿದಂತೆ ಎಷ್ಟು ಜನ ಸಿಬ್ಬಂದಿ ವರ್ಗದವರಿದ್ದಾರೆ; (ಶ್ರೇಣಿವಾರು ಮಾಹಿತಿ ನೀಡುವುದು)

(ಆ) ಇತ್ತೀಚಿಗೆ ಸಾರಿಗೆ ನೌಕರರು ವೇತನ ಇತರೆ ವಿಷಯಗಳಿಗೆ ಸಂಬಂಧಿಸಿದಂತೆ ಕರ್ತವ್ಯಕ್ಕೆ ಹಾಜರಾಗದೆ ಮುಷ್ಕರ ನಡೆಸಿದ್ದರ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಂಡಿದೆ; ಸಾರಿಗೆ ನೌಕರರ ಬೇಡಿಕೆಗಳನ್ನು ಈಡೇರಿಸುವಲ್ಲಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸರ್ಕಾರ ಎಲೆಕ್ಟ್ರಿಕ್ ಬಸ್ಸುಗಳನ್ನು ಓಡಿಸಲು ಯೋಜನೆ ರೂಪಿಸಿದೆಯೇ; ಅವುಗಳನ್ನು ತಯಾರಿಸಿರುವ ಕಂಪನಿಗಳು ಯಾವುವು; ಅವುಗಳನ್ನು ಖರೀದಿಸಿ ಸಾರಿಗೆ ನಿಗಮಗಳಿಗೆ ಒದಗಿಸಲು ಮುಂದೆ ಬಂದಿರುವ ಖಾಸಗಿ ಕಂಪನಿಗಳು ಯಾವುವು; ಇವುಗಳ ರೂಪರೇಷೆಯಲ್ಲಿ ಕೇಂದ್ರ ಸರ್ಕಾರ ಎಷ್ಟು ಅನುದಾನ ಒದಗಿಸಲಿದೆ? (ಸಂಪೂರ್ಣ ಮಾಹಿತಿ ಒದಗಿಸುವುದು)